# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 15 (72)
ಸದಸ್ಯರ ಹೆಸರು : ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 11-08-2025
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರೌಢ ಶಾಲೆಗಳಲ್ಲಿ ಇರುವಂತೆ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ತರಗತಿಗೆ ದೈನಂದಿನ ವೇಳಾಪಟ್ಟಿಯಲ್ಲಿ ಅವಕಾಶ ನೀಡಲಾಗಿದೆಯೇ; ನೀಡಲಾಗಿದ್ದಲ್ಲಿ, ವಾರಕ್ಕೆ ಎಷ್ಟು ಅವಧಿಯ ತರಗತಿಯನ್ನು ನೀಡಲಾಗಿದೆ; ನೀಡದಿದ್ದಲ್ಲಿ ಕಾರಣವೇನು: | ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ಯ ದಾಖಲಾತಿ ಮಾರ್ಗಸೂಚಿಯಂತೆ ಕಾಲೇಜಿನ ದಿನದ ಕಾರ್ಯನಿರ್ವಹಣಾ ಅವಧಿ 6 ಗಂಟೆಗೆ ಕಡಿಮೆ ಇಲ್ಲದಂತೆ ವೇಳಾಪಟ್ಟಿಯನ್ನು ಸಿದ್ಧಪಡಿಸಲು ತಿಳಿಸಲಾಗಿದೆ.<br>ಇದರಲ್ಲಿ ಕಾಲೇಜಿನ ಅವಶ್ಯಕತೆಗೆ ಹೊಂದಿಕೊಂಡಂತೆ ವೇಳಾಪಟ್ಟಿಯನ್ನು ಸಿದ್ಧಪಡಿಸಬಹುದಾಗಿದೆ ಮತ್ತು ಕರ್ನಾಟಕ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) (ಶೈಕ್ಷಣಿಕ, ನೋಂದಣಿ, ಆಡಳಿತ ಮತ್ತು ಸಹಾಯಾನುದಾನ ಇತರೆ) ನಿಯಮಗಳು 2024ರ ನಿಯಮದಂತೆ ಪ್ರತೀ ಕಾಲೇಜಿನಲ್ಲಿ ಆಟದ ಮೈದಾನ ಜಿಮ್ ಹೊಂದಿರುವುದು ಕಡ್ಡಾಯವಾಗಿರುತ್ತದೆ. |
| ಆ) | ರಾಜ್ಯದ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು: ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಂಜೂರಾಗಿವೆ; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಖ್ಯೆ ಎಷ್ಟು: | ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ :1319<br>ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಂಜೂರಾಗಿವೆ.<br>ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಖ್ಯೆ : 05 |
| ಇ) | ಖಾಲಿಯಿರುವ ಹಾಗೂ ಹುದ್ದೆಗಳು ಮಂಜೂರಾಗದ ಕಾಲೇಜುಗಳಲ್ಲಿ ಕ್ರೀಡಾ\| ಚಟುವಟಿಕೆಗಳನ್ನು ನಿರ್ವಹಿಸುವವರು ಯಾರು ಹಾಗೂ ಅಧಿಕೃತವಾಗಿ ಕ್ರೀಡಾ ಪಟುಗಳಿಗೆ ತರಬೇತಿ ನೀಡಿ ಭಾಗವಹಿಸಲು ವ್ಯವಸ್ಥೆ ಮಾಡುವವರು ಯಾರು: | ಖಾಲಿಯಿರುವ ಹಾಗೂ ಹುದ್ದೆಗಳು ಮಂಜೂರಾಗದ ಕಾಲೇಜುಗಳಲ್ಲಿ ಜಿಲ್ಲಾ ಉಪನಿರ್ದೇಶಕರುಗಳು ಈಗಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ದೈಹಿಕ ಶಿಕ್ಷಣ ಉಪನ್ಯಾಸಕರೊಂದಿಗೆ, ಅನುದಾನಿತ/ ಅನುದಾನರಹಿತ ಕಾಲೇಜುಗಳ ದೈಹಿಕ ಶಿಕ್ಷಣ ಉಪನ್ಯಾಸಕರುಗಳ ಸೇವೆ ಪಡೆದು ಕ್ರೀಡಾ |

| | | |
|---|---|---|
| | ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಅತಿಥಿ ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿಗೆ ಅವಕಾಶವಿದೆಯೇ: | ಪಟುಗಳಿಗೆ ತರಭೇತಿ ನೀಡಿ ಕ್ರೀಡೆಯಲ್ಲಿ ಭಾಗವಹಿಸಲು ವ್ಯವಸ್ಥೆ ನಡೆಸಲಾಗುತ್ತಿದೆ.<br>ಪ್ರಸ್ತುತ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಅತಿಥಿ ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿಗೆ ಅವಕಾಶ ಇರುವುದಿಲ್ಲ.<br>ಆದರೆ, 15 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಾತ್ರ ಖಾಲಿ ಇರುವುದರಿಂದ ಈ ಹುದ್ದೆಗಳಲ್ಲಿ 5 ನ್ನು ಬಡ್ತಿ ಮೂಲಕ ಭರ್ತಿಮಾಡಲು ಮತ್ತು 10 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿರುವುದರಿಂದ ಅತಿಥಿ ದೈಹಿಕ ಶಿಕ್ಷಣ ಉಪನ್ಯಾಸಕರ ನೇಮಕಾತಿಗಾಗಿ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |
| ಈ) | ದೈಹಿಕ ಶಿಕ್ಷಣ ಉಪನ್ಯಾಸಕರ ಕೊರತೆಯಿಂದ ತಾಲ್ಲೂಕು/ಜಿಲ್ಲಾ /ರಾಜ್ಯ ಮಟ್ಟದ ಕ್ರೀಡಾ ಸ್ಪರ್ಧೆಗಳನ್ನು ಅಧಿಕೃತವಾಗಿ ಯಾರಿಂದ ನಿರ್ವಹಿಸಲಾಗುತ್ತಿದೆ ? | ಪದವಿ ಪೂರ್ವ ಶಿಕ್ಷಣ ಹಂತದ ವಿದ್ಯಾರ್ಥಿಗಳಿಗೆ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ಯು ತಾಲ್ಲೂಕು / ಜಿಲ್ಲಾ ರಾಜ್ಯ ಮಟ್ಟದ ಕ್ರೀಡಾ ಸ್ಪರ್ಧೆಗಳನ್ನು ಜಿಲ್ಲಾ ಉಪನಿರ್ದೇಶಕರುಗಳ ನೇತೃತ್ವದಲ್ಲಿ ನಡೆಸಲಾಗುತ್ತದೆ.<br>ಜಿಲ್ಲಾ ಉಪನಿರ್ದೇಶಕರುಗಳು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ದೈಹಿಕ ಶಿಕ್ಷಣ ಉಪನ್ಯಾಸಕರೊಂದಿಗೆ ಹಾಗೂ ಅನುದಾನಿತ /ಅನುದಾನರಹಿತ ಕಾಲೇಜುಗಳ ದೈಹಿಕ ಶಿಕ್ಷಣ ಉಪನ್ಯಾಸಕರುಗಳ ಸೇವೆ ಪಡೆದು ನಡೆಸಲಾಗುತ್ತಿದೆ. |

ಸಂಖ್ಯೆ: ಇಪಿ 262 ಡಿಜಿಡಬ್ಲೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು